ಕರ್ನಾಟಕ ಸರ್ಕಾರ ಸಿ ಆರ್ ಪಿ ಸಿ 67

ಹೇಳಿಕೆ ಹಾಳೆ

(ಆರ್.ಪಿ.ಸಂಖ್ಯೆ **57**)

ನಮೂನೆ ಸಂಖ್ಯೆ 4

**2 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸಿಂಧನೂರು.**

**ಸಿ.ಸಿ.ನಂ.79/2023**

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ಸುರೇಶ್** | | |
| **ತಂದೆಃಹೆಸರು** | **ಹನುಮಂತ** | **ಪಿಡಬ್ಲೂಃ** | **12** |
| **ವಯಸ್ಸು** | **30 ವರ್ಷ** | **ಸಿಡಬ್ಲೂಃ** | **6** |
| **ಉದ್ಯೋಗಃ** | **ಕಲ್ಲು ಹೊಡೆಯುವ ಕೆಲಸ** | | |
| **ವಾಸ ಸ್ಥಳಃ** | **ಸೋಮಲಾಪುರ.** | | |

ದಿನಾಂಕ 29-04-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃಃ**

ಈ ದಿನ ನ್ಯಾಯಾಲಯದಲ್ಲಿ ಆರೋಪಿಯು ಗೈರು ಹಾಜರಾಗಿದ್ದು, ಆರೋಪಿ ಪರ ವಕೀಲರು ಕಲಂ 317 ಸಿ.ಆರ್.ಪಿ.ಸಿ. ಅಡಿಯಲ್ಲಿ ಅರ್ಜಿಯನ್ನು ದಾಖಲಿಸಿ, ಗುರುತಿಸುವ ವಿಚಾರದಲ್ಲಿ ತಕರಾರು ಇಲ್ಲ ಎಂದು ನುಡಿದಿದ್ದರಿಂದ, ಈ ಕೆಳಕಂಡಂತೆ ಸಾಕ್ಷಿಯ ವಿಚಾರಣೆ ತೆಗೆದುಕೊಳ್ಳಲಾಯಿತು.

ಆರೋಪಿತರ ಪರಿಚಯ ಇಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲೀಸರಿಗೆ ಯಾವುದೇ ಹೇಳಿಕೆಯನ್ನು ಕೊಟ್ಟಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲುಃಃ ಮಾನ್ಯ ಸ.ಸ.ಅ. ರವರಿಂದಃಃ**

ದಿ.04-11-2022 ರಂದು ಮಧ್ಯಾಹ್ನ ನೀವು, ಚಾಸಾ-7 ರವರು ಅಂಬಾಮಠ ಕೆರೆಗೆ ಹೋಗಲು ಕೆನಾಲ್ ಪಕ್ಕದ ರಸ್ತೆಯಲ್ಲಿ ಮ.12-10 ರ ಸುಮಾರಿಗೆ ಹೋಗುತ್ತಿದ್ದಾಗ, ಆರೋಪಿತರು

ಬಂದವರೇ ಚಾಸಾ-1 ರವರಿಗೆ ಏನಲೇ ಸೂಳೆ ಮಗನೇ, ನಮ್ಮನ್ನು ಕೇಳದೇ ಹೇಗೆ ಬೋರ್ ಆನ್ ಮಾಡಿಕೊಂಡೆ ಎಂದು ಹೇಳಿದರು ಎಂದರೆ ಸರಿಯಲ್ಲ. ಆಗ ಚಾಸಾ-1 ರವರು ಹೊಲದ ಮಾಲೀಕರಿಗೆ ಕೇಳಿ ನೀರು ಬಿಟ್ಟುಕೊಳ್ಳುತ್ತಿದ್ದೇನೆಂದು ಹೇಳಿದಾಗ, ಆರೋಪಿತರು ನಮಗೆ ಎದುರು ಮಾತನಾಡುತ್ತೀಯಾ ಎಂದು ಹೇಳಿ 1ನೇ ಆರೋಪಿ ಕಲ್ಲಿನಿಂದ ಚಾಸಾ-1 ರವರ ಎದೆಗೆ ಗುದ್ದಿದ್ದ ಎಂದರೆ ಸರಿಯಲ್ಲ. ಅದೇ ರೀತಿಯಾಗಿ 2ನೇ ಆರೋಪಿ ಕಲ್ಲಿನಿಂದ ಚಾಸಾ-1 ರವರಿಗೆ ಎದೆಗೆ ಗುದ್ದಿದ್ದ ಎಂದರೆ ಸರಿಯಲ್ಲ. 4ನೇ ಆರೋಪಿ ಕಲ್ಲಿನಿಂದ ಚಾಸಾ-1 ರವರ ಬೆನ್ನಿಗೆ ಗುದ್ದಿ, ಕೈಗಳಿಂದ ಮುಖಕ್ಕೆ ಚೂರಿದ್ದ ಎಂದರೆ ಸರಿಯಲ್ಲ. ಆಗ ಚಾಸಾ-4 ರವರು ಬಿಡಿಸಲು ಹೋದಾಗ ಆಕೆಗೆ 2ನೇ ಆರೋಪಿ ಕೈಗಳಿಂದ ಕಪಾಳಕ್ಕೆ ಹೊಡೆದು, ಮೈಮೇಲಿನ ಸೀರೆ ಎಳೆದು ಅವಮಾನ ಮಾಡಿದ್ದರು ಎಂದರೆ ಸರಿಯಲ್ಲ. ನಂತರ ಚಾಸಾ-2 ರವರು ಬಿಡಿಸಲು ಹೋದಾಗ ಆಕೆಗೆ 1ನೇ ಆರೋಪಿ ಕೈಗಳಿಂದ ಕಪಾಳಕ್ಕೆ ಹೊಡೆದಿದ್ದ ಎಂದರೆ ಸರಿಯಲ್ಲ. ಚಾಸಾ-5 ರವರು ಬಿಡಿಸಿಕೊಳ್ಳಲು ಹೋದಾಗ 1 & 2 ನೇ ಆರೋಪಿತರು ರವರು ಕೈಗಳಿಂದ ಬೆನ್ನಿಗೆ ಗುದ್ದಿದ್ದರು ಎಂದರೆ ಸರಿಯಲ್ಲ. 3ನೇ ಆರೋಪಿ ಕೈಗಳಿಂದ ನಿಮಗೆ ಗುದ್ದಿದ್ದರು ಎಂದರೆ ಸರಿಯಲ್ಲ. ನಂತರ ಅಲ್ಲಿ ಹೋಗುತ್ತಿದ್ದ ನೀವು & ಚಾಸಾ-7 ರವರು ಜಗಳ ಬಿಡಿಸಿದ್ದಿರಿ ಎಂದರೆ ಸರಿಯಲ್ಲ. ಆಗ ಆರೋಪಿತರು ಇನ್ನೊಮ್ಮೆ ಬೋರ್ ತಂಟೆಗೆ ಬಂದರೆ ನಿಮ್ಮನ್ನು ಜೀವಸಹಿತ ಬಿಡುವುದಿಲ್ಲ ಎಂದು ಬೆದರಿಕೆ ಹಾಕಿದ್ದರು ಎಂದರೆ ಸರಿಯಲ್ಲ. ಆಗ ಚಾಸಾ-4 ರವರು ಹೆಂಡತಿಯ ಕಿವಿಯಲ್ಲಿದ್ದ ಬುಗುಡಿ ಕಡ್ಡಿ & ಚಾಸಾ-1 ರವರ ಚೈನ್ ಬಿದ್ದು ಹೋಗಿತ್ತು ಎಂದರೆ ಸರಿಯಲ್ಲ.

ಸದರಿ ವಿಚಾರವಾಗಿ ನಾನು ಹೇಳಿಕೆ ಕೊಟ್ಟಿದ್ದೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದಿರುವುದರಿಂದ, ಸಾಕ್ಷಿಯು ಪೋಲೀಸರಿಗೆ ನೀಡಿದ ಹೇಳಿಕೆಯನ್ನು ನಿಪಿ-11 ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ.**

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇದೆ.**

**C/c 2 ನೇ ಅಪರ ಸಿವಿಲ್ ನ್ಯಾಯಾಧೀಶರು**

**ಮತ್ತು ಜೆ.ಎಂ.ಎಫ್.ಸಿ., ಸಿಂಧನೂರು.**